## ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003.

ಸಂಖ್ಯೆ: ಎ8/ಎಸ್ಎಸ್ಎಲ್ಸಿ/ಪೂ.ಸಿ.ಪ/30/2019-20 ದಿನಾಂಕ: 05-02-2020.

### ಜ್ಞಾಪನಾ

ವಿಷಯ: ಫೆಬ್ರವರಿ 2020ರ ರಾಜ್ಯಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವ ಸಿದ್ಧತಾ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಕ್ರಮ ತೆಗೆದುಕೊಳ್ಳುವ ಕುರಿತು.

ಉಲ್ಲೇಖ: ಮಂಡಳಿ ಪತ್ರ ಸಂಖ್ಯೆ. ಎ8/ಎಸ್.ಎಸ್.ಎಲ್.ಸಿ/ಪೂ.ಸಿ.ಪ. 30/2019-20 ದಿನಾಂಕ. 30-11-2019.

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯಾದ್ಯಾಂತ ಫೆಬ್ರವರಿ 2020ರ ರಾಜ್ಯಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವ ಸಿದ್ಧತಾ ಪರೀಕ್ಷೆಯನ್ನು ದಿನಾಂಕ. 17-02-2020 ರಿಂದ 24-02-2020ರವರೆಗೆ ನಡೆಸಲು ಮಂಡಳಿಯಿಂದ ವೇಳಾಪಟ್ಟಿಯನ್ನು ಪ್ರಕಟಿಸಿ ಉಲ್ಲೇಖದನ್ವಯ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ. ಹತ್ತನೆ ತರಗತಿಯ ಶಾಲಾ ಅಭ್ಯರ್ಥಿಗಳಿಗೆ ನಡೆಸುತ್ತಿರುವ ಪೂರ್ವ ಸಿದ್ಧತಾ ಪರೀಕ್ಷೆಯು ಪ್ರಮುಖ ಹಾಗೂ ಸೂಕ್ಷ್ಮವಾದ ವಿಷಯವಾಗಿದ್ದು ಮಾರ್ಚ್/ಏಪ್ರಿಲ್-2020ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳಿಗೆ ಪೂರಕವಾಗಿ ಆತ್ಮವಿಶ್ವಾಸವನ್ನು ಮೂಡಿಸಲು ಸಹಕಾರಿಯಾಗಿದೆ. ವಿಷಯವಾರು ಪ್ರಶ್ನೆಪತ್ರಿಕೆ ಸ್ವರೂಪ, ಮುಖ್ಯ ವಿಷಯಾಧಾರಿತ ಪ್ರಶ್ನೆಗಳ ರಚನೆ, ಪ್ರಶ್ನೆಪತ್ರಿಕೆಯ ಕಠಿಣತೆಯ ಮಟ್ಟ ಈ ಅಂಶಗಳಿಂದ ಮಂಡಳಿಯು ನಡೆಸುವ ಮುಖ್ಯ ಪರೀಕ್ಷೆಗೆ ವಿಷಯವಾರು ಅಭ್ಯಾಸವನ್ನು ಸಜ್ಜುಗೊಳಿಸಲು ಸಹಕಾರಿಯಾಗುತ್ತದೆ. ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯನ್ನು ಹೇಗೆ ಪಾರದರ್ಶಕವಾಗಿ ನಡೆಸಿ ಮೌಲ್ಯಮಾಪನವನ್ನು ಮಾಡಲಾಗುವುದೋ ಅದೇ ರೀತಿಯಲ್ಲಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಪೂರ್ವ ಸಿದ್ಧತಾ ಪರೀಕ್ಷೆಯನ್ನು ಅತ್ಯಂತ ಜವಾಬ್ದಾರಿಯಿಂದ ವಿಷಯವಾರು ಪರೀಕ್ಷೆಯನ್ನು ನಡೆಸಿ ಶಾಲಾ ಹಂತದಲ್ಲಿ ಮೌಲ್ಯಮಾಪನ ಮಾಡಿ, ವಿದ್ಯಾರ್ಥಿಯ ಬುದ್ಧಿಮಟ್ಟವನ್ನು ಅರಿತು ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಗೆ ಸಜ್ಜುಗೊಳಿಸುವುದು ಶಾಲಾ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರ ಕರ್ತವ್ಯ ಅತ್ಯವಶ್ಯಕವಾಗಿದೆ. ಶಾಲಾ ಹಂತದಲ್ಲಿ ಪೂರ್ವ ಸಿದ್ಧತಾ ಪರೀಕ್ಷೆ ನಡೆಸುತ್ತಿರುವುದರಿಂದ ಶಾಲಾ ಮುಖ್ಯ ಶಿಕ್ಷಕರು ಪ್ರಶ್ನೆಪತ್ರಿಕೆ ಸೋರಿಕೆಯಾಗದಂತೆ ಅತ್ಯಂತ ಜವಾಬ್ದಾರಿಯಿಂದ ಪರೀಕ್ಷೆಯನ್ನು ನಡೆಸಬೇಕಾಗಿದೆ.

ಶಾಲಾ ಮುಖ್ಯ ಶಿಕ್ಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯ ಪ್ರಶ್ನೆಪತ್ರಿಕೆ ವಿತರಿಸುವ ಮಾರ್ಗಾಧಿಕಾರಿಗಳಿಂದ ವಿಷಯವಾರು ಪ್ರಶ್ನೆಪತ್ರಿಕೆಗಳ ಬಂಡಲ್‌ಗಳನ್ನು ಸ್ವೀಕರಿಸಿದ ನಂತರ ಮುಖ್ಯ ಶಿಕ್ಷಕರ ಕಛೇರಿಯಲ್ಲಿಯೇ ಭದ್ರತಾ ಕೊಠಡಿ ನಿರ್ಮಾಣ ಮಾಡಿಕೊಂಡು ಅಲ್ಮೇರಾದಲ್ಲಿ ವಿಷಯವಾರು ಪ್ರಶ್ನೆಪತ್ರಿಕೆಗಳನ್ನು ಠೇವಣಿ ಮಾಡಿ ಮೊಹರು ಮಾಡುವುದು ಅತ್ಯವಶ್ಯಕವಾಗಿದೆ. ವಿಷಯವಾರು ಪರೀಕ್ಷಾ ದಿನದಂದು ವೇಳಾಪಟ್ಟಿಯಂತೆ ವಿಷಯಕ್ಕೆ ಸಂಬಂಧಿಸಿದ ಪ್ರಶ್ನೆಪತ್ರಿಕೆಯ ಬಂಡಲ್‌ನ್ನು ಮಾತ್ರ ಹೊರತೆಗೆದು ಪುನ: ಆಲ್ಮೇರಾವನ್ನು ಲಾಕ್ ಮಾಡಿ ಮೊಹರು ಹಾಕಲು ಶಾಲಾ ಮುಖ್ಯಶಿಕ್ಷಕರು ಅಗತ್ಯ ಕ್ರಮ ತೆಗೆದುಕೊಳ್ಳಬೇಕಾಗಿದೆ. ಶಾಲೆಯಲ್ಲಿ ಪರೀಕ್ಷೆ ಪ್ರಾರಂಭವಾಗುವ 10 ನಿಮಿಷ ಮುಂಚಿತವಾಗಿ ಮಾತ್ರ ಪ್ರಶ್ನೆಪತ್ರಿಕೆಯ ಬಂಡಲ್‌ನ್ನು ತೆರೆದು, ಪರೀಕ್ಷೆ ಪ್ರಾರಂಭವಾಗುವ 05 ನಿಮಿಷ ಮುಂಚಿತವಾಗಿ ಮಾತ್ರ ಕೊಠಡಿ ಮೇಲ್ವಿಚಾರಕರಿಗೆ ಪ್ರಶ್ನೆಪತ್ರಿಕೆಗಳನ್ನು ವಿತರಿಸಲು ಶಾಲಾ ಮುಖ್ಯ ಶಿಕ್ಷಕರು ಅಗತ್ಯ ಕ್ರಮ ತೆಗೆದುಕೊಳ್ಳಬೇಕಾಗಿದೆ. ವಿದ್ಯಾರ್ಥಿಗಳು ಪರೀಕ್ಷೆಯನ್ನು ಬರೆಯಲು ಖಾಲಿ ಉತ್ತರ ಪತ್ರಿಕೆ(ಬಿಳಿ ಹಾಳೆ) ಗಳನ್ನು ಹಾಗೂ ಗಣಿತದ ವಿಷಯದ ದಿನದಂದು ಗ್ರಾಫ್ ಷೀಟ್‌ನ್ನು ತರುವಂತೆ ಸೂಚನೆ ನೀಡಬೇಕಿರುತ್ತದೆ.

ಮಂಡಳಿಯಿಂದ ಜಿಲ್ಲಾ ಉಪನಿರ್ದೇಶಕರು ಗೌಪ್ಯ ಪ್ರಶ್ನೆಪತ್ರಿಕೆಗಳ ಬಂಡಲ್‌ಗಳನ್ನು ಸ್ವೀಕರಿಸಿದ ನಂತರ ಅತ್ಯಂತ ಜವಾಬ್ದಾರಿಯಿಂದ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಗೌಪ್ಯ ಪ್ರಶ್ನೆಪತ್ರಿಕೆಗಳ ಬಂಡಲ್ ಗಳನ್ನು ವಿತರಿಸಿ ಸ್ವೀಕೃತಿ ಪಡೆಯುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಶಾಲೆಗಳಿಗೆ ಗೌಪ್ಯ ಪ್ರಶ್ನೆಪತ್ರಿಕೆಗಳನ್ನು ವಿತರಿಸಲು ಮಾರ್ಗ ನಕ್ಷೆ ರೂಪಿಸಿ ಮಾರ್ಗಾಧಿಕಾರಿಗಳನ್ನು ನೇಮಕಾತಿ ಮಾಡಿ ಶಾಲೆಗಳಿಗೆ ಗೌಪ್ಯ ಪ್ರಶ್ನೆಪತ್ರಿಕೆಗಳನ್ನು ವಿತರಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವುದು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಶಿಕ್ಷಣ ಸಂಯೋಜಕರು ಶಾಲಾ ಮುಖ್ಯ ಶಿಕ್ಷಕರು ಮಾರ್ಗಾಧಿಕಾರಿಗಳಿಂದ ಗೌಪ್ಯ ಪ್ರಶ್ನೆಪತ್ರಿಕೆಗಳನ್ನು ಸ್ವೀಕರಿಸಿದ ನಂತರ ಕ್ರಮಬದ್ಧವಾಗಿ ಭದ್ರತಾ ಕೊಠಡಿ ನಿರ್ಮಿಸಿ ಸುರಕ್ಷಿತವಾಗಿ ಆಲ್ಮೇರಾದಲ್ಲಿ ಗೌಪ್ಯ ಪ್ರಶ್ನೆಪತ್ರಿಕೆಗಳನ್ನು ಠೇವಣಿ ಮಾಡಿ ಮೊಹರು ಹಾಕಿರುವ ಬಗ್ಗೆ ಆಕಸ್ಮಿಕ ಭೇಟಿ ನೀಡಿ ಖಚಿತ ಪಡಿಸಿಕೊಳ್ಳಲು ಅಗತ್ಯ ಕ್ರಮತೆಗೆದುಕೊಳ್ಳುವುದು. ಜಿಲ್ಲಾ ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾಧಿಕಾರಿಗಳು ಎಸ್.ಎಸ್.ಎಲ್.ಸಿ. ಪೂರ್ವ ಸಿದ್ಧತಾ ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಲು, ಪ್ರಶ್ನೆಪತ್ರಿಕೆಗಳು ಸೋರಿಕೆಯಾಗದಂತೆ ಎಚ್ಚರಿಕೆ ವಹಿಸಲು ಹಾಗೂ ಶಾಲಾ ಹಂತದಲ್ಲಿ ಮುಖ್ಯಶಿಕ್ಷಕರು ಪೂರ್ವ ಸಿದ್ಧತೆ ಮಾಡಿಕೊಳ್ಳಲು ಮುಖ್ಯ ಶಿಕ್ಷಕರ ಸಭೆಯನ್ನು ಆಯೋಜಿಸಿ ಮಾರ್ಗದರ್ಶನ ನೀಡಲು ಸೂಚಿಸಿದೆ.

(ವಿ. ಸುಮಂಗಲ) 3/12/2020
ನಿರ್ದೇಶಕರು(ಪರೀಕ್ಷೆಗಳು)
3/12

ಪ್ರತಿಯನ್ನು:

1. ಜಿಲ್ಲಾ ಉಪನಿರ್ದೇಶಕರು(ಆಡಳಿತ) ಇವರ ಸೂಕ್ತ ಕ್ರಮಕ್ಕಾಗಿ.
2. ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರು ಅಗತ್ಯ ಕ್ರಮ ಕೈಗೊಳ್ಳುವುದಕ್ಕಾಗಿ.
3. ಕಛೇರಿ ಪ್ರತಿ.